979(1362) ಶ್ರೀ ಮಾರಿಹಾಳ ಸುರೇಶ್ ಶಿವರುದ್ರಪ್ಪ(ಕಿತ್ತೂರು) : ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಬೆಳಗಾಂ ಜಿಲ್ಲಾ, ಚೆನ್ನಮ್ಮನ ಕಿತ್ತೂರಿನಲ್ಲಿ ಕರ್ನಾಟಕ ವಾಯುವ್ಯ ರಸ್ತೆ, ಸಾರಿಗೆ ಸಂಸ್ಥೆ ಡಿಪೋ ಸ್ಥಾಪಿಸುವ ವಿಚಾರ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಕಾಮಗಾರಿ ಪ್ರಾರಂಭಿಸುವುದು ಯಾವಾಗ ಹಾಗೂ ಇದಕ್ಕಾಗಿ ಸರ್ಕಾರವು ನಿಗದಿಪಡಿಸಿರುವ ಹಣ ಎಷ್ಟು?

ಶ್ರೀ ಮಲ್ಲಿಕಾರ್ಜುನ ಖರ್ಗೆ(ಜಲ ಸಂಪನ್ಮೂಲ ಮತ್ತು ಸಾರಿಗೆ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

986(1553) ಶ್ರೀ ಎನ್.ಎಲ್.ನರೇಂದ್ರಬಾಬು (ರಾಜಾಜಿನಗರ) : ಮಾನ್ಯ ಮುಖ್ಯ ಮಂತ್ರಿಯವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಬೆಂಗಳೂರು ರಾಜಾಜಿನಗರ ಪ್ರವೇಶ ದ್ವಾರದ ಬಳಿ ಗ್ರೇಡ್ ಸೆಪರೇಟರ್ ನಿರ್ಮಾಣದ ಕಾಮಗಾರಿಗೆ ಇಲ್ಲಿಯವರೆಗೆ ಬಿಡುಗಡೆಯಾದ ಮೊತ್ತವೆಷ್ಟು; ಹಾಗೂ ಆಗಿರುವ ಕಾಮಗಾರಿ ಕೆಲಸವೆಷ್ಟು;

ಆ) ಇದರ ಅಂದಾಜು ವೆಚ್ಚವನ್ನು ಪರಿಷ್ಕೃತ ಗೊಳಿಸಲಾಗಿದೆಯೇ; ಹಾಗಿಲ್ಲದಿದ್ದಲ್ಲಿ, ಪರಿಷ್ಕರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ(ವಿವರ ಒದಗಿಸುವುದು) :

ಇ) ಈ ಕಾಮಗಾರಿ ಗುತ್ತಿಗೆದಾರರು ಕಡಿಮೆ ಸಂಖ್ಯೆಯಲ್ಲಿ ಕೆಲಸಗಾರರನ್ನು ನೇಮಿಸಿ ಕೊಂಡು ಕಾಮಗಾರಿ ಕೆಲಸ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ತ್ವರಿತಗತಿಯಲ್ಲಿ ಕಮಗಾರಿಯನ್ನು ಪೂರ್ಣಗೊಳಿಸಲಾಗುವುದೇ :

ಈ) ಈ ಕಾಮಗಾರಿಯ ಮೂಲ ಗುತ್ತಿಗೆದಾರರು ಉಪ ಗುತ್ತಿಗೆದಾರರಿಗೆ ಕಾಮಗಾರಿ ಕೆಲಸ ವಹಿಸಿರುವುದು ನಿಯಮ ಬಾಹಿರವಲ್ಲವೇ; ಹಾಗಿದ್ದಲ್ಲಿ, ಇದು ಗುತ್ತಿಗೆ ಷರತ್ತುಗಳನ್ನು ಉಲ್ಲಂಘಿಸಿದಂತೆ ಆಗುವುದಿಲ್ಲವೇ; ಇದರ ಬಗ್ಗೆ ಕ್ರಮ ಜರುಗಿಸಲಾಗಿದೆಯೇ?

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಯವರು) :

ಅ) ರೂ.10.40 ಕೋಟಿಗಳು.

ಶೇ.57 ರಷ್ಟು ಕೆಲಸ ಪೂರ್ಣಗೊಂಡಿರುತ್ತದೆ.

ಆ) ಇಲ್ಲ.

ಇ) ಹೌದು ಬಂದಿದೆ. ಈ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗಿದೆ.

ಈ) ಈ ಕಾಮಗಾರಿಯನ್ನು ಮೂಲ ಗುತ್ತಿಗೆದಾರರೇ ನಿರ್ವಹಿಸುತ್ತರುವುದರಿಂದ ಉಪಗುತ್ತಿಗೆ ನೀಡಿದ್ದಾರೆಂದು ವಿಷಯವು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.